ಗುರುವಾರ,12.02.2026
ಬೆಂಗಳೂರು, ಬೆಲೆ: 5ರೂ,2 ಪುಟಗಳು
ಸಂಪುಟ 01 – ಸಂಚಿಕೆ 142

Digital Varthe Kannada Daily
Volume 01 - Issue 142
Thursday, 12.02.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

ಸೊಸೆ ಮೇಲೆ ಮಾವನ ದೌರ್ಜನ್ಯ; ಮಗನಿಗೆ ಹೇಳಿದರೆ ಕೊಲೆ ಬೆದರಿಕೆ

ಬೆಂಗಳೂರು: ಕುಟುಂಬದ ಒಳಗೇ ನಡೆದ ಅಸಭ್ಯ ವರ್ತನೆಯೊಂದು ರಾಜಧಾನಿಯಲ್ಲಿ ಬೆಳಕಿಗೆ ಬಂದಿದೆ. "ನನ್ನ ಆಸೆ ಈಡೇರಿಸು" ಎಂದು ಒತ್ತಾಯಿಸಿ, ಸೊಸೆಗೆ ಮಾವನೇ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಥಣಿಸಂದ್ರ ಪ್ರದೇಶದ ಪ್ರತಿಷ್ಠಿತ ಶಾಲೆಯ ಪ್ರಿನ್ಸಿಪಾಲ್ ಆಗಿರುವ ಮಹಿಳೆಯೊಬ್ಬರು, ತಮ್ಮ ಗಂಡನ ತಂದೆಯ ವಿರುದ್ಧ ಆರ್.ಟಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಆರೋಪಿ ಕಾವಲ್ ಬೈರಸಂದ್ರದ ಶಾಲೆಯೊಂದರ ಸಂಸ್ಥಾಪಕನಾಗಿರುವುದಾಗಿ ತಿಳಿದುಬಂದಿದೆ. ವಿಷಯವನ್ನು ಮಗನಿಗೆ ತಿಳಿಸಿದರೆ ಕೊಲೆ ಮಾಡುತ್ತೇನೆ ಎಂದು ಬೆದರಿಕೆ ಹಾಕಿದ್ದಾನೆ ಎಂಬುದನ್ನೂ ದೂರಿನಲ್ಲಿ ಉಲ್ಲೇಖಿಸಲಾಗಿದೆ.

2007ರಲ್ಲಿ ವಿವಾಹವಾದ ಈ ಮಹಿಳೆಗೆ ಆರಂಭಿಕ ದಿನಗಳಲ್ಲಿ ಕುಟುಂಬ ಜೀವನ ಸಾಮಾನ್ಯವಾಗಿಯೇ ಸಾಗಿತ್ತು. ಆದರೆ ಕಾಲಕ್ರಮೇಣ ಮಾವನ ವರ್ತನೆ ಅನುಚಿತ ದಿಕ್ಕು ತಾಳಲು ಆರಂಭಿಸಿತು ಎಂದು ದೂರಿನಲ್ಲಿ ಹೇಳಲಾಗಿದೆ. 2005ರಲ್ಲಿ ಪತ್ನಿಯನ್ನು ಕಳೆದುಕೊಂಡಿದ್ದ ಆರೋಪಿ, 2006ರಲ್ಲಿ ಎರಡನೇ ಮದುವೆಯಾಗಿದ್ದರೂ, ತನ್ನ ಸೊಸೆಯ ಮೇಲೆ ಕೆಟ್ಟ ನೋಟ ಹಾಕುತ್ತಿದ್ದನೆಂದು ಆರೋಪಿಸಲಾಗಿದೆ. ಪಕ್ಕದ ಅಪಾರ್ಟ್‌ಮೆಂಟ್‌ನಲ್ಲಿ ವಾಸವಾಗಿದ್ದ ಆತ, ಮಹಿಳೆ ಮನೆಯಲ್ಲಿ ಒಬ್ಬಳೇ ಇರುವ ಸಮಯಗಳನ್ನು ಗಮನಿಸಿ ಮನೆಗೆ ಬಂದು ಕಿರುಕುಳ ನೀಡುತ್ತಿದ್ದನೆಂದು ಹೇಳಲಾಗಿದೆ.

ಅಸಭ್ಯ ಪದಗಳನ್ನು ಬಳಸುವುದು, ಬಲವಂತವಾಗಿ ಬಟ್ಟೆ ಬಿಚ್ಚಲು ಯತ್ನಿಸುವುದು, ಅನಾಚಾರ ವರ್ತನೆ ತೋರಿಸುವುದು ಸೇರಿದಂತೆ ಹಲವು ರೀತಿಯ ಲೈಂಗಿಕ ದೌರ್ಜನ್ಯಗಳನ್ನು 2020ರಿಂದಲೇ ಆರಂಭಿಸಿದ್ದಾನೆ ಎಂದು ಸಂತ್ರಸ್ತೆ ದೂರಿನಲ್ಲಿ ವಿವರಿಸಿದ್ದಾಳೆ. ಆರಂಭದಲ್ಲಿ ಭಯದಿಂದ ಮತ್ತು ಕುಟುಂಬದ ಮಾನಹಾನಿಯ ಆತಂಕದಿಂದ ಮಹಿಳೆ ವಿಷಯವನ್ನು ಹೊರಗೆ ಹೇಳದೆ ಸಹಿಸಿಕೊಂಡಿದ್ದಾಳೆ. ಆದರೆ ಆಕೆಯ ಮೇಲಷ್ಟೇ ಅಲ್ಲ, ಮಕ್ಕಳಿಗೂ ಜೀವ ಬೆದರಿಕೆ ಹಾಕಿದ್ದಾನೆ ಎಂದು ಆರೋಪಿಸಲಾಗಿದೆ. ಕೆಲ ಸಂದರ್ಭಗಳಲ್ಲಿ ದೈಹಿಕ ಹಲ್ಲೆಯನ್ನೂ ನಡೆಸಿದ್ದಾನೆ ಎನ್ನಲಾಗಿದೆ.

ಅಪಾರ್ಟ್‌ಮೆಂಟ್‌ನ ಲಿಫ್ಟ್ ಒಳಗೆ, ಶಾಲೆಯ ಕ್ಯಾಬಿನ್‌ನಲ್ಲಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಕಿರುಕುಳ ನೀಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಸೊಸೆಯ ಸೌಂದರ್ಯದ ಬಗ್ಗೆ ಪತ್ರ ಬರೆದು ಆಕೆಯ ಮುಂದೆ ಓದುತ್ತಿದ್ದ ಆತ, ನಂತರ ಆ ಪತ್ರವನ್ನು ತಾನೇ ಇಟ್ಟುಕೊಳ್ಳುತ್ತಿದ್ದನೆಂದು ಆರೋಪಿಸಲಾಗಿದೆ. ಇತ್ತೀಚೆಗೆ ಮತ್ತೆ ಆಕೆಯ ಮೈಕೈ ಮುಟ್ಟಿ ಕಿರುಕುಳ ನೀಡಿದಾಗ ಮಹಿಳೆ ತೀವ್ರವಾಗಿ ವಿರೋಧ ವ್ಯಕ್ತಪಡಿಸಿದ್ದಾಳೆ. ಇದರಿಂದ ಆಕ್ರೋಶಗೊಂಡ ಆರೋಪಿ ಹಲ್ಲೆ ನಡೆಸಿದ್ದಾನೆ ಎಂಬುದು ದೂರಿನ ಮತ್ತೊಂದು ಅಂಶ.

ಕೊನೆಗೂ ಸಹನೆಯ ಮಿತಿ ಮೀರಿ, ಸಂತ್ರಸ್ತೆ ಈ ವಿಚಾರವನ್ನು ತಮ್ಮ ಪತಿಗೆ ತಿಳಿಸಿದ್ದಾಳೆ. ಪತಿ ಪ್ರಶ್ನಿಸಿದ ಬಳಿಕ ಹಿರಿಯರು ಮಧ್ಯಸ್ಥಿಕೆ ವಹಿಸಿ ಆರೋಪಿ ವಿರುದ್ಧ ಎಚ್ಚರಿಕೆ ನೀಡಿದರೂ, ಕೆಲವು ದಿನಗಳ ಬಳಿಕ ಮತ್ತೆ ಹಳೆಯ ಚಾಳಿ ಮುಂದುವರಿಸಿದ್ದಾನೆ ಎನ್ನಲಾಗಿದೆ. ಇದರಿಂದ ಬೇಸತ್ತ ಮಹಿಳೆ ಕೊನೆಗೂ ಕಾನೂನು ನೆರವು ಪಡೆಯಲು ಮುಂದಾಗಿದ್ದು, ಮಾವನ ವಿರುದ್ಧ ಅಧಿಕೃತವಾಗಿ ದೂರು ದಾಖಲಿಸಿದ್ದಾಳೆ. ಪ್ರಕರಣದ ತನಿಖೆಯನ್ನು ಪೊಲೀಸರು ಕೈಗೊಂಡಿದ್ದಾರೆ.

ಹಿರಿಯ ಪತ್ರಕರ್ತ, ಮಾಜಿ ಎಂಎಲ್‌ಸಿ ಪಿ.ರಾಮಯ್ಯ ನಿಧನ

ಬೆಂಗಳೂರು: ಕನ್ನಡ ಮತ್ತು ಇಂಗ್ಲಿಷ್ ಮಾಧ್ಯಮ ಲೋಕದಲ್ಲಿ ಅಪಾರ ಗೌರವ ಗಳಿಸಿದ್ದ ಹಿರಿಯ ಪತ್ರಕರ್ತ ಪಿ. ರಾಮಯ್ಯ (93) ಅವರು ಮಂಗಳವಾರ ರಾತ್ರಿ ನಿಧನರಾಗಿದ್ದಾರೆ. 'ದಿ ಹಿಂದೂ' ಪತ್ರಿಕೆಯಲ್ಲಿ ಐದು ದಶಕಗಳ ಕಾಲ ವಿವಿಧ ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದ ಕಾರಣ 'ಹಿಂದೂ ರಾಮಯ್ಯ' ಎಂದೇ ಖ್ಯಾತರಾಗಿದ್ದರು. ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಬೆಂಗಳೂರಿನ ಮಲ್ಲಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ಮಂಗಳವಾರ ರಾತ್ರಿ ಸುಮಾರು 9 ಗಂಟೆ ಸುಮಾರಿಗೆ ಅವರು ಕೊನೆಯುಸಿರೆಳೆದಿದ್ದಾರೆ.

1933ರ ಸೆಪ್ಟೆಂಬರ್ 12ರಂದು ಜನಿಸಿದ ರಾಮಯ್ಯ ಅವರು ದೀರ್ಘಕಾಲ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ವಿಶಿಷ್ಟ ಗುರುತನ್ನು ಮೂಡಿಸಿದ್ದರು. ಅವರ ಅಗಲಿಕೆಯಿಂದ ರಾಜ್ಯದ ಮಾಧ್ಯಮ ಕ್ಷೇತ್ರಕ್ಕೆ ಅಪೂರಣೀಯ ನಷ್ಟ ಉಂಟಾಗಿದೆ. ಅವರು ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು ಹಾಗೂ ಮೊಮ್ಮಕ್ಕಳನ್ನು ಅಗಲಿದ್ದಾರೆ.

ಪತ್ರಿಕೋದ್ಯಮದಲ್ಲಿ ಐದು ದಶಕಗಳ ಸೇವೆ: 'ದಿ ಹಿಂದೂ' ಪತ್ರಿಕೆಯಲ್ಲಿ ಸುಮಾರು 50 ವರ್ಷಗಳಿಗಿಂತ ಹೆಚ್ಚು ಕಾಲ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ ರಾಮಯ್ಯ ಅವರು ನಿಷ್ಠಾವಂತ ಮತ್ತು ತತ್ವನಿಷ್ಠ ಪತ್ರಕರ್ತರಾಗಿ ಗುರುತಿಸಿಕೊಂಡಿದ್ದರು. ರಾಜಕೀಯ, ಇತಿಹಾಸ, ಸಂಸ್ಕೃತಿ ಮತ್ತು ಸಾಮಾಜಿಕ ವಿಚಾರಗಳ ಬಗ್ಗೆ ಅವರಿಗಿದ್ದ ಆಳವಾದ ಜ್ಞಾನ ಮತ್ತು ವಿಶ್ಲೇಷಣಾ ಸಾಮರ್ಥ್ಯ ಅನೇಕರಿಗೆ ಪ್ರೇರಣೆಯಾಗಿತ್ತು.

ವಿಧಾನ ಪರಿಷತ್ ಸದಸ್ಯರಾಗಿ ಸೇವೆ: ಪತ್ರಿಕೋದ್ಯಮದ ಹೊರತಾಗಿಯೂ ರಾಮಯ್ಯ ಅವರು ವಿಧಾನ ಪರಿಷತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಶಾಸನ ಮಂಡಳಿಯಲ್ಲಿ ಅವರು ಪರಿಣಾಮಕಾರಿಯಾಗಿ ಚರ್ಚೆಗಳಲ್ಲಿ ಭಾಗವಹಿಸಿ, ಸಾಮಾಜಿಕ ಹಾಗೂ ಮಾಧ್ಯಮ ಸಂಬಂಧಿತ ವಿಷಯಗಳಲ್ಲಿ ತಮ್ಮ ಅನುಭವವನ್ನು ಹಂಚಿಕೊಂಡಿದ್ದರು. ವಿಶೇಷವಾಗಿ ಸಣ್ಣ ಪತ್ರಿಕೆಗಳ ಸಮಸ್ಯೆಗಳ ಅಧ್ಯಯನಕ್ಕಾಗಿ ರಚಿಸಲಾದ ಸಮಿತಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ, ಸಣ್ಣ ಪತ್ರಿಕೆಗಳಿಗೆ ಎದುರಾಗಿದ್ದ ಹಲವು ಸವಾಲುಗಳಿಗೆ ಪರಿಹಾರ ಕಂಡುಹಿಡಿಯಲು ಶ್ರಮಿಸಿದ್ದರು.

ಪ್ರಶಸ್ತಿಗಳ ಗೌರವ: ಪತ್ರಿಕೋದ್ಯಮ ಕ್ಷೇತ್ರಕ್ಕೆ ನೀಡಿದ ಅಪಾರ ಕೊಡುಗೆಯನ್ನು ಗುರುತಿಸಿ ರಾಮಯ್ಯ ಅವರಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಹಾಗೂ ಕೆಂಪೇಗೌಡ ಪ್ರಶಸ್ತಿ ಸೇರಿದಂತೆ ಅನೇಕ ಗೌರವಗಳು ಲಭಿಸಿದ್ದವು. ಅವರು ಪತ್ರಿಕಾ ಅಕಾಡೆಮಿಯ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದರು.

ಸಾರ್ವಜನಿಕರ ದರ್ಶನಕ್ಕೆ ಪಾರ್ಥಿವ ಶರೀರ: ಬುಧವಾರ ಬೆಳಗ್ಗೆ 9 ಗಂಟೆಯಿಂದ ಸದಾಶಿವನಗರದಲ್ಲಿರುವ ಅವರ ನಿವಾಸದಲ್ಲಿ ಸಾರ್ವಜನಿಕರ ದರ್ಶನಕ್ಕೆ ಪಾರ್ಥಿವ ಶರೀರವನ್ನು ಇಡಲಾಗುವುದು. ಬಳಿಕ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬ ಮೂಲಗಳು ತಿಳಿಸಿವೆ. ಅನೇಕ ರಾಜಕೀಯ, ಮಾಧ್ಯಮ ಮತ್ತು ಸಾಮಾಜಿಕ ಕ್ಷೇತ್ರದ ಗಣ್ಯರು ಅಂತಿಮ ನಮನ ಸಲ್ಲಿಸಲು ಆಗಮಿಸುವ ನಿರೀಕ್ಷೆಯಿದೆ.

ಸಿಎಂ ಸಿದ್ದರಾಮಯ್ಯ ಸಂತಾಪ: ಹಿರಿಯ ಪತ್ರಕರ್ತ ಪಿ. ರಾಮಯ್ಯ ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗಾಢ ಸಂತಾಪ ಸೂಚಿಸಿದ್ದಾರೆ. "ಹಿರಿಯ ಪತ್ರಕರ್ತ ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಪಿ. ರಾಮಯ್ಯ ಅವರ ನಿಧನದಿಂದ ದುಃಖಿತನಾಗಿದ್ದೇನೆ. 'ದಿ ಹಿಂದೂ' ಪತ್ರಿಕೆಯಲ್ಲಿ ಐದು ದಶಕಗಳಿಗಿಂತ ಹೆಚ್ಚು ಕಾಲ ಸೇವೆ ಸಲ್ಲಿಸಿದ ಅವರು ನನ್ನ ಹಿತಚಿಂತಕರಾಗಿದ್ದರು," ಎಂದು ಸಿಎಂ ತಿಳಿಸಿದ್ದಾರೆ.

"ರಾಜ್ಯದ ಹಿತಕ್ಕಾಗಿ ಸದಾ ಕಾಳಜಿ ವಹಿಸಿದ್ದ ರಾಮಯ್ಯ ಅವರಲ್ಲಿದ್ದ ರಾಜಕೀಯ, ಇತಿಹಾಸ, ಸಂಸ್ಕೃತಿ ಮತ್ತು ಸಾಮಾಜಿಕ ವಿದ್ಯಮಾನಗಳ ಜ್ಞಾನ-ಅನುಭವ ಬೆರಗುಗೊಳಿಸುತ್ತಿತ್ತು. ವಿಧಾನ ಪರಿಷತ್ ಸದಸ್ಯರಾಗಿ ಅವರು ಪರಿಣಾಮಕಾರಿಯಾಗಿ ಕೆಲಸ ಮಾಡಿದ್ದರು. ಸಣ್ಣ ಪತ್ರಿಕೆಗಳ ಸಮಸ್ಯೆಗಳ ಪರಿಹಾರಕ್ಕಾಗಿ ಶ್ರಮಿಸಿದ ಅವರ ಸೇವೆ ಸದಾ ಸ್ಮರಣೀಯ," ಎಂದು ಸಿಎಂ ಕೊಂಡಾಡಿದ್ದಾರೆ.

ಕೊನೆಯಲ್ಲಿ, "ರಾಮಯ್ಯ ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತೇನೆ. ಅವರ ಕುಟುಂಬದ ದುಃಖದಲ್ಲಿ ನಾನೂ ಭಾಗಿಯಾಗಿದ್ದೇನೆ," ಎಂದು ತಿಳಿಸಿದ್ದಾರೆ.

ಒಳಚರಂಡಿ ಮ್ಯಾನ್‌ಹೋಲ್‌ಗೆ ಬಿದ್ದು ಕಾರ್ಮಿಕ ಸಾವು

ನವದೆಹಲಿ: ಗುಂಡಿಯಲ್ಲಿ ಬೈಕ್ ಸವಾರ ಸಾವನ್ನಪ್ಪಿದ ಘಟನೆಗೆ ಐದು ದಿನಗಳೇ ಕಳೆದಿರುವಾಗ ಮತ್ತೊಂದು ದುರ್ಘಟನೆ ರಾಜಧಾನಿಯಲ್ಲಿ ಸಂಭವಿಸಿದೆ. ತೆರೆದಿಟ್ಟಿದ್ದ ಒಳಚರಂಡಿ ಮ್ಯಾನ್‌ಹೋಲ್‌ಗೆ ಬಿದ್ದು ಕಾರ್ಮಿಕನೊಬ್ಬ ಪ್ರಾಣ ಕಳೆದುಕೊಂಡಿರುವ ಪ್ರಕರಣ ಬೆಳಕಿಗೆ ಬಂದಿದೆ. ನಗರದಲ್ಲಿ ಸಾರ್ವಜನಿಕ ಸುರಕ್ಷತೆ ಕುರಿತು ಮತ್ತೆ ಗಂಭೀರ ಪ್ರಶ್ನೆಗಳು ಉದ್ಭವಿಸಿವೆ.

ಈ ದುರ್ಘಟನೆ ಪ್ರದೇಶದ ಸೆಕ್ಟರ್ 32ರಲ್ಲಿ ನಡೆದಿದೆ. ಬಿಹಾರದ ಸಮಸ್ತಿಪುರ ಜಿಲ್ಲೆಯ ನಿವಾಸಿಯಾಗಿದ್ದ ಬಿರ್ಜು ಕುಮಾರ್ ರೈ ಎಂಬ ಕಾರ್ಮಿಕ ಈ ದುರಂತಕ್ಕೆ ಬಲಿಯಾಗಿದ್ದಾರೆ. ಬೇಗಂಪುರ ಪ್ರದೇಶದ ಮಹಾಶಕ್ತಿ ಕಾಳಿ ದೇವಸ್ಥಾನದ ಸಮೀಪ ಸೋಮವಾರ ಸಂಜೆ ಘಟನೆ ಸಂಭವಿಸಿದೆ ಎಂದು ತಿಳಿದುಬಂದಿದೆ.

ಸೋಮವಾರ ಸಂಜೆ ಬಿರ್ಜು ತನ್ನ ಸ್ನೇಹಿತನೊಂದಿಗೆ ನಡೆದುಕೊಂಡು ಹೋಗುತ್ತಿದ್ದ ವೇಳೆ ಆಕಸ್ಮಿಕವಾಗಿ ರಸ್ತೆಯ ಮಧ್ಯದಲ್ಲಿದ್ದ ತೆರೆದ ಮ್ಯಾನ್‌ಹೋಲ್‌ಗೆ ಬಿದ್ದಿದ್ದಾರೆ. ಮುನ್ನಡೆದು ನಡೆಯುತ್ತಿದ್ದ ಸ್ನೇಹಿತನಿಗೆ ಈ ಘಟನೆ ಕ್ಷಣಾರ್ಧದಲ್ಲಿ ಗೊತ್ತಾಗಿರಲಿಲ್ಲ ಎನ್ನಲಾಗಿದೆ. ಸ್ಥಳದಲ್ಲಿ ಬೆಳಕು ಕೊರತೆ ಹಾಗೂ ಎಚ್ಚರಿಕೆ ಫಲಕಗಳಿಲ್ಲದಿರುವುದು ದುರ್ಘಟನೆಗೆ ಕಾರಣವಾಗಿರಬಹುದು ಎಂದು ಪ್ರಾಥಮಿಕ ಮಾಹಿತಿಗಳು ಸೂಚಿಸುತ್ತಿವೆ. ಮಂಗಳವಾರವಷ್ಟೇ ಬಿರ್ಜು ಕಾಣೆಯಾಗಿರುವ ಕುರಿತು ಮಾಹಿತಿ ದೊರಕಿದ ಬಳಿಕ ಶೋಧ ಕಾರ್ಯಾಚರಣೆ ನಡೆಸಿ, ಮ್ಯಾನ್‌ಹೋಲ್ ಒಳಗೆ ಮೃತದೇಹ ಪತ್ತೆಯಾಗಿದೆ.

ಇತ್ತೀಚಿನ ದಿನಗಳಲ್ಲಿ ರಾಜಧಾನಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಸ್ತೆ ಸುರಕ್ಷತೆ ಮತ್ತು ಮೂಲಸೌಕರ್ಯ ನಿರ್ವಹಣೆ ಕುರಿತು ಹಲವು ಘಟನೆಗಳು ಚರ್ಚೆಗೆ ಗ್ರಾಸವಾಗಿವೆ. ಕಳೆದ ತಿಂಗಳು ನೆರೆಯ ನಗರದಲ್ಲೂ ಇದೇ ರೀತಿಯ ದುರಂತ ಸಂಭವಿಸಿತ್ತು. 27 ವರ್ಷದ ಸಾಫ್ಟ್‌ವೇರ್ ಎಂಜಿನಿಯರ್ ಯುವರಾಜ್ ಮೆಹ್ತಾ ಅವರು ದಟ್ಟ ಮಂಜಿನ ನಡುವೆ ಕಾರು ಚಲಾಯಿಸುತ್ತಿದ್ದಾಗ ನಿಯಂತ್ರಣ ತಪ್ಪಿ ಚರಂಡಿಯ ಭಾಗಕ್ಕೆ ಜಾರಿ ಸಾವನ್ನಪ್ಪಿದ್ದರು. ಸೆಕ್ಟರ್ 150ರಲ್ಲಿರುವ ತಮ್ಮ ಅಪಾರ್ಟ್‌ಮೆಂಟ್ ಕಡೆಗೆ ತಿರುಗುವಾಗ ಈ ಅಪಘಾತ ಸಂಭವಿಸಿತ್ತು. ರಸ್ತೆ ಮತ್ತು ಹೊಂಡದ ಮಧ್ಯದ ಭಾಗದಲ್ಲಿ ತಡೆಗೋಡೆಗಳಿದ್ದರೂ, ದೃಶ್ಯಮಾನತೆ ಕೊರತೆಯಿಂದ ಅಪಾಯ ಉಂಟಾಯಿತು ಎಂದು ವರದಿಯಾಗಿತ್ತು.

ಸತತವಾಗಿ ಸಂಭವಿಸುತ್ತಿರುವ ಇಂತಹ ಘಟನೆಗಳು ನಗರ ಮೂಲಸೌಕರ್ಯಗಳ ನಿರ್ವಹಣೆ, ಸುರಕ್ಷತಾ ಕ್ರಮಗಳು ಮತ್ತು ಅಧಿಕಾರಿಗಳ ಜವಾಬ್ದಾರಿತನದ ಕುರಿತು ಪ್ರಶ್ನೆಗಳನ್ನು ಎಬ್ಬಿಸುತ್ತಿವೆ. ತೆರೆದ ಮ್ಯಾನ್‌ಹೋಲ್‌ಗಳು ಮತ್ತು ರಕ್ಷಣಾ ವ್ಯವಸ್ಥೆಗಳ ಕೊರತೆ ಜನರ ಜೀವಕ್ಕೆ ಭಾರಿ ಅಪಾಯವಾಗುತ್ತಿದೆ ಎಂಬ ಆತಂಕ ವ್ಯಕ್ತವಾಗಿದೆ. ಪ್ರಕರಣ ಸಂಬಂಧ ತನಿಖೆ ಮುಂದುವರಿದಿದೆ.

ಮದುವೆ ನೆಪದಲ್ಲಿ 9 ಯುವತಿಯರ ಬಾಳಲ್ಲಿ ಚೆಲ್ಲಾಟವಾಡಿದ್ದ 'ಮ್ಯಾಟ್ರಿಮೋನಿ ಮನ್ಮಥ

ಮಂಗಳೂರು: ಆನ್‌ಲೈನ್ ಮ್ಯಾಟ್ರಿಮೋನಿ ವೆಬ್‌ಸೈಟ್‌ಗಳ ಮೂಲಕ ಮದುವೆಯ ಹೆಸರಿನಲ್ಲಿ ಯುವತಿಯರನ್ನು ಗುರಿಯಾಗಿಸಿಕೊಂಡು ಲಕ್ಷಾಂತರ ರೂಪಾಯಿ ವಂಚನೆ ಎಸಗುತ್ತಿದ್ದ ಖಿತರ್ನಾಕ್ ಆರೋಪಿಯನ್ನು ಮಂಗಳೂರು ಪೊಲೀಸರು ಬಂಧಿಸಿದ್ದಾರೆ. ಮದುವೆ ಮಾಡಿಕೊಳ್ಳುವುದಾಗಿ ನಂಬಿಸಿ ಹಂತ ಹಂತವಾಗಿ ಹಣ ಪಡೆದು ಬಳಿಕ ನಾಪತ್ತೆಯಾಗುತ್ತಿದ್ದ ಆರೋಪಿಯ ವಂಚನೆ ಜಾಲ ಇದೀಗ ಬಯಲಾಗಿದೆ.

ಬಂಧಿತನನ್ನು ಸುಶಾಂತ್ ಪೂಜಾರಿ ಎಂದು ಗುರುತಿಸಲಾಗಿದೆ. ಈತನಿಗೆ ಸಾಥ್ ನೀಡಿದ ಮುಲ್ಕಿ ನಿವಾಸಿ ಭಾಸ್ಕರ್‌ನನ್ನೂ ಪೊಲೀಸರು ವಶಕ್ಕೆ ಪಡೆದಿದ್ದಾರೆ. ತನಿಖೆಯಲ್ಲಿ ಬಹಿರಂಗವಾದಂತೆ, ಸುಶಾಂತ್ ತನ್ನ ಅಳಿಯ ಎಂದು ಪರಿಚಯಿಸಿ ಸಂತ್ರಸ್ತೆಯ ಕುಟುಂಬದವರಲ್ಲಿ ನಂಬಿಕೆ ಮೂಡಿಸಲು ಭಾಸ್ಕರ್ ಸಹಕರಿಸಿದ್ದಾನೆ. ಕೆಲ ಸಂದರ್ಭಗಳಲ್ಲಿ ಧಾರ್ಮಿಕ ವಿಧಿವಿಧಾನಗಳಲ್ಲೂ ಭಾಗವಹಿಸಿ ಸಂಬಂಧ ಗಂಭೀರವಾಗಿರುವಂತೆ ನಟನೆ ಮಾಡುತ್ತಿದ್ದರೆಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರೊಂದಿಗೆ ಮದುವೆ, ಒಂಬತ್ತು ಯುವತಿಯರಿಗೆ ವಂಚನೆ: ಮದುವೆಯ ಹೆಸರಿನಲ್ಲಿ ಒಂದೇ ಇಬ್ಬರು ಅಲ್ಲ, ಒಟ್ಟು ಒಂಬತ್ತು ಯುವತಿಯರನ್ನು ಸುಶಾಂತ್ ವಂಚಿಸಿದ್ದಾನೆ ಎಂಬುದು ತನಿಖೆಯಲ್ಲಿ ತಿಳಿದುಬಂದಿದೆ. ಈ ಪೈಕಿ ಇಬ್ಬರು ಯುವತಿಯರೊಂದಿಗೆ ನಿಜವಾಗಿಯೇ ಮದುವೆಯಾಗಿ ಬಳಿಕ ಹಣ ಪಡೆದು ಕೈಕೊಟ್ಟಿರುವುದಾಗಿ ಹೇಳಲಾಗಿದೆ. ಮ್ಯಾಟ್ರಿಮೋನಿ ವೆಬ್‌ಸೈಟ್ ಮೂಲಕ ಪರಿಚಯ ಮಾಡಿಕೊಂಡು ಮೊದಲು ವಿಶ್ವಾಸ ಗಳಿಸಿ, ಬಳಿಕ ಕುಟುಂಬ ಹಿನ್ನೆಲೆ, ಉದ್ಯೋಗ, ಭವಿಷ್ಯ ಯೋಜನೆಗಳ ಬಗ್ಗೆ ಸುಳ್ಳು ಮಾಹಿತಿ ನೀಡಿ ನಂಬಿಕೆ ಬಿಗಿಗೊಳಿಸುತ್ತಿದ್ದ. ನಂತರ ಮದುವೆ ಸಿದ್ಧತೆ, ಆರ್ಥಿಕ ತುರ್ತು ಪರಿಸ್ಥಿತಿ ಅಥವಾ ಹೂಡಿಕೆ ಎಂಬ ನೆಪದಲ್ಲಿ ಲಕ್ಷಾಂತರ ರೂಪಾಯಿ ಹಣ ಪಡೆದು ಸಂಪರ್ಕ ಕಡಿತಗೊಳಿಸುತ್ತಿದ್ದನೆಂದು ಪೊಲೀಸರು ವಿವರಿಸಿದ್ದಾರೆ.

ಮುಂಬೈನಲ್ಲಿ ಒಬ್ಬ ಯುವತಿಯನ್ನು ಮದುವೆಯಾಗಿದ್ದು, ಆಕೆಯಿಂದ ಸುಮಾರು 6.6 ಲಕ್ಷ ಹಣ ಪಡೆದು ಬಳಿಕ ಪರಾರಿಯಾಗಿದ್ದಾನೆ. ಉಡುಪಿ ಭಾಗದ ಇಬ್ಬರು ಯುವತಿಯರನ್ನು ಮದು ವೆಯಾಗುವುದಾಗಿ ನಂಬಿಸಿ ಹಣ ವಸೂಲಿ ಮಾಡಿದ್ದಾನೆ. ಬೆಂಗಳೂರಿನ ಇಬ್ಬರು ಯುವತಿಯರು, ಕಾರ್ಕಳದ ಒಬ್ಬ ಯುವತಿ ಹಾಗೂ ಮಂಗಳೂರಿನ ಮತ್ತೊಬ್ಬ ಯುವತಿಯನ್ನು ಸಹ ಇದೇ ರೀತಿ ಮೋಸಗೊಳಿಸಿದ್ದ ಪ್ರಕರಣಗಳು ಈಗ ಬೆಳಕಿಗೆ ಬಂದಿವೆ.

ದೂರು ಆಧಾರಿಸಿ ಬಯಲಾದ ವಂಚನೆ ಜಾಲ: ಈ ಕುರಿತು ಮಂಗಳೂರಿನ ಕಾವೂರು ಪೊಲೀಸ್ ಠಾಣೆಯಲ್ಲಿ ಸಂತ್ರಸ್ತೆಯೊಬ್ಬಳು ದೂರು ನೀಡಿದ್ದಳು. ದೂರಿನ ಮೇರೆಗೆ ಪೊಲೀಸರು ಸಮಗ್ರ ತನಿಖೆ ಆರಂಭಿಸಿದರು. ಆರೋಪಿಯ ಮೊಬೈಲ್ ಸಂವಹನ, ಬ್ಯಾಂಕ್ ವ್ಯವಹಾರಗಳು ಮತ್ತು ಮ್ಯಾಟ್ರಿಮೋನಿ ಖಾತೆಗಳ ಮಾಹಿತಿ ಪರಿಶೀಲಿಸಿದಾಗ ವಂಚನೆಯ ಸರಣಿ ಪ್ರಕರಣಗಳು ಒಂದೊಂದಾಗಿ ಹೊರಬಂದಿವೆ. ನಕಲಿ ಮಾವ-ಅಳಿಯರಂತೆ ನಟಿಸಿ ಮದುವೆ ನಾಟಕವಾಡಿ ಯುವತಿಯರ ಭಾವನೆ ಹಾಗೂ ಹಣದೊಂದಿಗೆ ಆಟವಾಡಿದ್ದ ಆರೋಪಿಗಳನ್ನು ಇದೀಗ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಪೊಲೀಸರ್ ಮ್ಯಾಟ್ರಿಮ

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರಿಗೆ ಬೇಟಿ ಮಾಡಿದ ಆಹಾರ ಸಚಿವ ಕೆಹೆಚ್:- ಮುನಿಯಪ್ಪ

ನವದೆಹಲಿ:ಮಾನ್ಯ ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಶಿಯವರ ನೇತೃತ್ವದಲ್ಲಿ ನವದೆಹಲಿಯ ಕೃಷಿ ಭವನದಲ್ಲಿ ನಡೆದ ಆಹಾರ ಇಲಾಖೆಯ ಸಭೆಯಲ್ಲಿ ಮಾನ್ಯ ಆಹಾರ ಸಚಿವರಾದ ಕೆಹೆಚ್. ಮುನಿಯಪ್ಪ ರವರು ಭಾಗವಹಿಸಿದರು.

ಕೇಂದ್ರ ಸರ್ಕಾರದ ಮಾರ್ಗ ಸೂಚಿಗಳಂತೆ ಕರ್ನಾಟಕ ಸರ್ಕಾರವು ಕನಿಷ್ಠ ಬೆಂಬಲ ಬೆಲೆ (ಎಂ ಎಸ್ ಪಿ) ಯೋಜನೆಯಡಿ ರೈತರಿಂದ ಧಾನ್ಯಗಳು ಹಾಗೂ ಭತ್ತ/ಕಸ್ಟಮ್ ಮಿಲ್ಡ್ ರೈಸ್ ಖರೀದಿ ಕಾರ್ಯವನ್ನು ನಿಯಮಾನುಸಾರವಾಗಿ ನಡೆಸುತ್ತಿದೆ.

ಖರೀದಿಸಲಾದ ಆಹಾರ ಧಾನ್ಯಗಳನ್ನು ಕೇಂದ್ರ ಪೂಲ್‌ಗೆ ಸೇರಿಸಿ, ಭಾರತ ಸರ್ಕಾರದ ಅನುಮೋದನೆಯೊಂದಿಗೆ ಸಾರ್ವಜನಿಕ ವಿತರಣಾ ವ್ಯವಸ್ಥೆ ಅಡಿಯಲ್ಲಿ ವಿತರಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ, ನಿಗದಿತ ಪ್ರಕ್ರಿಯೆಯಂತೆ ಕರ್ನಾಟಕ ಸರ್ಕಾರವು ಕೇಂದ್ರ ಸರ್ಕಾರಕ್ಕೆ ಪರಿಹಾರ ದಾವೆಗಳನ್ನು ಸಲ್ಲಿಸಿದೆ. ಆದರೆ ಖರೀದಿ ಋತು 2023–24 ಹಾಗೂ 2024–25ಕ್ಕೆ ಸಂಬಂಧಿಸಿದಂತೆ ರೂ. 1,446.36 ಕೋಟಿ ಮೊತ್ತದ ತಾತ್ಕಾಲಿಕ ಒಖಕ ಪರಿಹಾರ ಮೊತ್ತವು ಬಹುಕಾಲದಿಂದ ಬಾಕಿ ಉಳಿದಿರುವುದು ರಾಜ್ಯದ ಆರ್ಥಿಕ ಸಂಪನ್ಮೂಲಗಳ ಮೇಲೆ ಗಂಭೀರ ಒತ್ತಡವನ್ನುಂಟುಮಾಡುತ್ತಿದೆ.

ಇದಲ್ಲದೆ, 2025–26ರ ಖರೀದಿ ಋತುವಿನ ಕಾರ್ಯಾಚರಣೆಗಳು ಈಗಾಗಲೇ ಪ್ರಾರಂಭವಾಗಿದ್ದು, 31.01.2026ರ ತನಕ 2,86,365ಕ್ಕೂ ಅಧಿಕ ರೈತರು ತಮ್ಮ ಉತ್ಪನ್ನಗಳನ್ನು ಸರಬರಾಜು ಮಾಡಲು ನೋಂದಣಿ ಮಾಡಿಕೊಂಡಿದ್ದಾರೆ.

ರೈತರಿಗೆ ಸಮಯಕ್ಕೆ ಸರಿಯಾಗಿ ಹಣ ಪಾವತಿಸುವುದು, ಎಂ ಎಸ್ ಪಿ ವ್ಯವಸ್ಥೆಯ ಮೇಲಿನ ಅವರ ವಿಶ್ವಾಸವನ್ನು ಕಾಯ್ದುಕೊಳ್ಳುವುದು ಹಾಗೂ ಪ್ರಸ್ತುತ ನಡೆಯುತ್ತಿರುವ ಖರೀದಿ ಕಾರ್ಯಾಚರಣೆಗಳನ್ನು ಸುಗಮವಾಗಿ ನಡೆಸಲು ಹಣದ ಲಭ್ಯತೆ ಅತ್ಯಂತ ಮಹತ್ವದ್ದಾಗಿದೆ.

ಈ ಎಲ್ಲ ಅಂಶಗಳನ್ನು ಪರಿಗಣಿಸಿ, ಬಹುಕಾಲದಿಂದ ಬಾಕಿ ಉಳಿದಿರುವ ಎಂ ಎಸ್ ಪಿ ಪರಿಹಾರ ಹಣವನ್ನು ತ್ವರಿತವಾಗಿ ಬಿಡುಗಡೆ ಮಾಡುವಂತೆ ಸಂಬಂಧಪಟ್ಟವರಿಗೆ ಮನವಿ ಮಾಡಲಾಗಿದೆ. ಇದರಿಂದ ರಾಜ್ಯ ಸರ್ಕಾರವು ರೈತರಿಗೆ ಸಮಯಕ್ಕೆ ಸರಿಯಾಗಿ ಪಾವತಿಯನ್ನು ಮಾಡಲಿದ್ದು, ಖರೀದಿ ಯೋಜನೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಸಹಕಾರಿಯಾಗಲಿದೆ ಎಂದರು.

ಈ ಸಂದರ್ಭದಲ್ಲಿ ಸರ್ಕಾರದ ಕಾರ್ಯದರ್ಶಿ ಕನಗವಲ್ಲಿ, ಆಹಾರ ನಿಗಮದ ನಿರ್ದೇಶಕರಾದ ಜಗದೀಶ್, ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ಕಷ್ಟಪಟ್ಟು ಬೆಳೆದ ರೈತರಿಗೆ ತೂಕದಲ್ಲಿ ಮೋಸ

ಹಾವೇರಿ:ರೈತನು ಈ ದೇಶದ ಬೆನ್ನೆಲುಬು ಎಂದು ಹೇಳಲಾಗುತ್ತದೆ. ಆದರೆ ಇತ್ತೀಚಿನ ದಿನಗಳಲ್ಲಿ ರೈತರಿಗೆ ವಿವಿಧ ರೀತಿಯಲ್ಲಿ ಅನ್ಯಾಯ ಹಾಗೂ ಮೋಸವಾಗುತ್ತಿರುವ ಘಟನೆಗಳು ಹೆಚ್ಚುತ್ತಿವೆ ಎಂಬ ಆತಂಕ ವ್ಯಕ್ತವಾಗುತ್ತಿದೆ. ಇದೀಗ ಹಾವೇರಿ ಜಿಲ್ಲೆಯ ಎಪಿಎಂಸಿ ಮಾರುಕಟ್ಟೆಯಲ್ಲಿ ಕಡಲೆ ಮಾರಾಟ ಮಾಡಲು ಬಂದಿದ್ದ ರೈತನಿಗೆ ತೂಕದಲ್ಲಿ ಮೋಸ ಮಾಡಿರುವ ಆರೋಪ ಕೇಳಿಬಂದಿದ್ದು, ಘಟನೆ ಸ್ಥಳದಲ್ಲೇ ರೈತ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಹಾವೇರಿ ತಾಲೂಕಿನ ಬಸವನಕಟ್ಟಿ ಗ್ರಾಮದ ಶರಣಗೌಡ ಪಾಟೀಲ ಎಂಬ ರೈತ ತಮ್ಮ ಹೊಲದಲ್ಲಿ ಬೆಳೆದ ಕಡಲೆಯನ್ನು ಮಾರಾಟ ಮಾಡಲು ಮಾರುಕಟ್ಟೆಗೆ ತಂದಿದ್ದರು. ಮಾರುಕಟ್ಟೆಗೆ ತರುವ ಮೊದಲು ಮನೆಯಲ್ಲಿಯೇ ತೂಕಮಾಡಿ ಬಂದಿದ್ದ ಅವರು, ಒಂದೊಂದು ಚೀಲದಲ್ಲಿ 58 ಕೆಜಿ, 57 ಕೆಜಿ ಹಾಗೂ 56 ಕೆಜಿ ತೂಕವಿದೆ ಎಂದು ಖಚಿತಪಡಿಸಿಕೊಂಡಿದ್ದರು. ನಂತರ ಎಪಿಎಂಸಿ ಮಾರುಕಟ್ಟೆಯ ಎರೆಸೀಮೆ ಅಂಗಡಿಯಲ್ಲಿ ಮರುತೂಕ ಮಾಡಿಸಿದಾಗ ಪ್ರತಿ ಚೀಲದಲ್ಲೂ 3 ರಿಂದ 4 ಕೆ-ಜಿಯಷ್ಟು ತೂಕ ವ್ಯತ್ಯಾಸ ಕಾಣಿಸಿಕೊಂಡಿದೆ ಎಂದು ರೈತ ಆರೋಪಿಸಿದ್ದಾರೆ.

ಈ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ ಶರಣಗೌಡ ಪಾಟೀಲ, "ರೈತರು ಹಗಲು-ರಾತ್ರಿ ಶ್ರಮಪಟ್ಟು ಬೆಳೆದ ಬೆಳೆ ಮಾರಾಟ ಮಾಡಲು ಬಂದಾಗಲೂ ವ್ಯಾಪಾರಸ್ಥರು ಹೀಗೆ ಮೋಸ ಮಾಡಿದರೆ ನಾವು ಬದುಕುವುದು ಹೇಗೆ?" ಎಂದು ಪ್ರಶ್ನಿಸಿದ್ದಾರೆ. ತೂಕದಲ್ಲಿ ವ್ಯತ್ಯಾಸ ಕಂಡುಬಂದ ತಕ್ಷಣವೇ ಅವರು ಅಂಗಡಿ ಮುಂದೆ ಪ್ರತಿಭಟನೆ ನಡೆಸಿ ನ್ಯಾಯ ಕೋರಿ ಕೂಗಿಕೊಂಡಿದ್ದಾರೆ.

ಎಪಿಎಂಸಿ ಮಾರುಕಟ್ಟೆಯಲ್ಲಿ ತೂಕದ ಮೋಸವಾಗುತ್ತಿದೆ ಎಂಬ ಆರೋಪ ಕೇಳಿಬಂದ ಹಿನ್ನೆಲೆಯಲ್ಲಿ ಸ್ಥಳದಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ಆದರೆ ಅಂಗಡಿ ಮಾಲೀಕ ಸೋಮಶೇಖರ್ ಎರೆಸೀಮೆ, "ಯಾವುದೇ ದೊಡ್ಡ ವ್ಯತ್ಯಾಸವಾಗಿಲ್ಲ, ಸಣ್ಣಪುಟ್ಟ ವ್ಯತ್ಯಾಸಗಳಷ್ಟೇ ಇರಬಹುದು ಸರ್" ಎಂದು ಸಮಜಾಯಿಷಿ ನೀಡಲು ಯತ್ನಿಸಿದ್ದಾರೆ.

ಘಟನೆಯ ಬಗ್ಗೆ ಮಾಹಿತಿ ದೊರಕುತ್ತಿದ್ದಂತೆಯೇ ಎಪಿಎಂಸಿ ನಿರ್ದೇಶಕ ಹಾಗೂ ಸಹಾಯಕ ಆಯುಕ್ತ ಕಲ್ಯಾಣಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಾಥಮಿಕ ತನಿಖೆಯಲ್ಲಿ ತೂಕದಲ್ಲಿ ವ್ಯತ್ಯಾಸ ಕಂಡುಬಂದಿರುವುದು ತಿಳಿದುಬಂದಿದೆ ಎಂದು ಅವರು ತಿಳಿಸಿದ್ದಾರೆ. ರೈತನಿಗೆ ನ್ಯಾಯ ದೊರಕುವಂತೆ ಕ್ರಮ ಕೈಗೊಳ್ಳಲಾಗುವುದು ಹಾಗೂ ಸಂಬಂಧಿತ ಅಂಗಡಿಯನ್ನು ಸೀಜ್ ಮಾಡುವ ಕುರಿತು ಕ್ರಮ ಕೈಗೊಳ್ಳುತ್ತೇವೆ ಎಂದು ಅಧಿಕಾರಿಗಳು ಭರವಸೆ ನೀಡಿದ್ದಾರೆ.

ಈ ಘಟನೆ ರೈತರಿಗೆ ಮಾರುಕಟ್ಟೆಗಳಲ್ಲಿ ನ್ಯಾಯಸಮ್ಮತ ತೂಕ ಮತ್ತು ಬೆಲೆ ದೊರಕುತ್ತಿರುವುದೇ ಎಂಬ ಪ್ರಶ್ನೆಯನ್ನು ಮತ್ತೆ ಎಬ್ಬಿಸಿದೆ. ರೈತ ಸಂಘಟನೆಗಳು ಕೂಡ ಈ ಬಗ್ಗೆ ಗಂಭೀರವಾಗಿ ಗಮನ ಹರಿಸುವಂತೆ ಒತ್ತಾಯಿಸುತ್ತಿವೆ.

ಕನ್ನಡ ಶಾಲೆ ಮುಚ್ಚುತ್ತಿರುವುದು ಖಂಡನೀಯ: ರಾಜ್ಯ ಸರ್ಕಾರದ ವಿರುದ್ಧ ಮಾಜಿ ಸಿಎಂ ಬೊಮ್ಮಾಯಿ ಕಿಡಿ



ಬೆಂಗಳೂರು: ರಾಜ್ಯ ಸರ್ಕಾರವು ಕರ್ನಾಟಕ ಪಬ್ಲಿಕ್ ಸ್ಕೂಲ್ (ಕೆಪಿಎಸ್) ಮ್ಯಾಗ್ನೆಟ್ ಯೋಜನೆ ಜಾರಿಗೆ ಮುಂದಾಗಿರುವ ಹಿನ್ನೆಲೆಯಲ್ಲಿ ಕನ್ನಡ ಸರ್ಕಾರಿ ಶಾಲೆಗಳ ಭವಿಷ್ಯ ಕುರಿತು ರಾಜ್ಯದಾದ್ಯಂತ ಚರ್ಚೆಗಳು ಜೋರಾಗಿವೆ. ಈ ಯೋಜನೆಯಡಿ ಕೆಲವು ಕನ್ನಡ ಮಾಧ್ಯಮ ಶಾಲೆಗಳನ್ನು ವಿಲೀನಗೊಳಿಸುವ ಅಥವಾ ಹಂತ ಹಂತವಾಗಿ ಮುಚ್ಚುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತವಾಗುತ್ತಿದೆ. ಈ ವಿಚಾರವಾಗಿ ಮಾಜಿ ಮುಖ್ಯಮಂತ್ರಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ರಾಜ್ಯ ಸರ್ಕಾರ ಈಗಾಗಲೇ 638 ಕನ್ನಡ ಶಾಲೆಗಳನ್ನು ಮುಚ್ಚಿದೆ ಎಂದು ಆರೋಪಿಸಿರುವ ಅವರು, ಇದು ಕನ್ನಡ ಭಾಷೆ ಹಾಗೂ ಕನ್ನಡ ಶಾಲೆಗಳ ವಿರುದ್ಧದ ಕ್ರಮ ಎಂದು ಹೇಳಿದ್ದಾರೆ. "ಕನ್ನಡ ಮತ್ತು ಕನ್ನಡಿಗರ ಹಿತಾಸಕ್ತಿಗೆ ಧಕ್ಕೆ ತರುವ ಯಾವುದೇ ನಿರ್ಧಾರವನ್ನು ನಾವು ಒಪ್ಪಲಾರವು. ತಕ್ಷಣವೇ ಮುಚ್ಚಲಾದ ಕನ್ನಡ ಶಾಲೆಗಳನ್ನು ಪುನರಾರಂಭಿಸಬೇಕು" ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ನವದೆಹಲಿಯಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದೆ ಎಂದು ಟೀಕಿಸಿದರು. "ರಾಜ್ಯ ಸರ್ಕಾರ ದಿವಾಳಿಯ ಸ್ಥಿತಿಗೆ ತಲುಪಿದೆ. ಸರ್ಕಾರಿ ನೌಕರರಿಗೆ ಸಂಬಳ ನೀಡಲು ಕಷ್ಟವಾಗುತ್ತಿದೆ. ಈ ಆರ್ಥಿಕ ಸಂಕಷ್ಟವನ್ನು ಸಮರ್ಥಿಸಿಕೊಳ್ಳಲು ಕನ್ನಡ ಶಾಲೆಗಳನ್ನು ಮುಚ್ಚುವ ಕೆಲಸ ನಡೆಯುತ್ತಿದೆ" ಎಂದು ಕಿಡಿಕಾರಿದರು.

ಇದೇ ವೇಳೆ ಕಾಂಗ್ರೆಸ್ ಪಕ್ಷದ ಮೇಲೂ ಅವರು ತೀವ್ರ ಟೀಕೆ ನಡೆಸಿದರು. ಚುನಾವಣೆಯಲ್ಲಿ ನಿರಂತರ ಸೋಲು ಅನುಭವಿಸುತ್ತಿರುವ ಕಾರಣ ಕಾಂಗ್ರೆಸ್ ನಾಯಕರು ಹತಾಶರಾಗಿದ್ದಾರೆ ಎಂದು ಹೇಳಿದ್ದಾರೆ. ಸಂಸತ್ತಿನ ವರ್ತನೆ ಕುರಿತು ಮಾತನಾಡಿದ ಅವರು, "ಬೆಂಚ್‌ಗಳ ಮೇಲೆ ನಿಲ್ಲುವುದು, ಸ್ಪೀಕರ್‌ರ ವಿರುದ್ಧ ಆಕ್ರೋಶ ವ್ಯಕ್ತಪಡಿಸುವುದು, ಸದನದ ಕಾರ್ಯಚಟುವಟಿಕೆಗಳಿಗೆ ಅಡ್ಡಿಪಡಿಸುವುದು ಮಿತಿಮೀರಿದ ನಡೆ" ಎಂದು ಅಭಿಪ್ರಾಯಪಟ್ಟರು.

ಕಾಂಗ್ರೆಸ್ ಮಹಿಳಾ ಸಂಸದರು ಪ್ರಧಾನಮಂತ್ರಿಯ ಆಸನದವರೆಗೆ ಬಂದು ಅವರನ್ನು ತಡೆಯಲು ಯತ್ನಿಸಿದ್ದಾರೆ ಎಂಬುದಾಗಿ ಅವರು ಆರೋಪಿಸಿದರು. "ಸಂಸತ್ತಿನ ಇತಿಹಾಸದಲ್ಲಿ ಇಂತಹ ಘಟನೆಗಳು ನಡೆದಿಲ್ಲ" ಎಂದು ಹೇಳಿದರು.

ಪ್ರತಿಪಕ್ಷದ ನಾಯಕ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, "ಅವರು ಏನು ಮಾಡುತ್ತಾರೆ ಎನ್ನುವುದು ಗೊತ್ತಿಲ್ಲ. ಆದರೆ ಜನರ ಸಮಸ್ಯೆಗಳ ಬಗ್ಗೆ ಮಾತನಾಡುವ ಬದಲು ಅಡ್ಡಿಪಡಿಸುವುದನ್ನೇ ಅಜೆಂಡಾ ಮಾಡಿಕೊಂಡಿದ್ದಾರೆ. ಬಹುತೇಕ ಅದೇ ಮುಂದುವರಿಯಬಹುದು" ಎಂದು ಕಿಡಿಕಾರಿದರು.

ಒಟ್ಟಾರೆ, ಕನ್ನಡ ಶಾಲೆಗಳ ವಿಚಾರ ಮತ್ತು ಸಂಸತ್ತಿನ ರಾಜಕೀಯ ವಾತಾವರಣ ಕುರಿತು ಮಾಜಿ ಸಿಎಂ ಬೊಮ್ಮಾಯಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಈ ವಿಷಯ ರಾಜ್ಯ ರಾಜಕೀಯದಲ್ಲಿ ಮತ್ತಷ್ಟು ಚರ್ಚೆಗೆ ಕಾರಣವಾಗಿದೆ.

47 ಗಂಟೆಗಳಲ್ಲಿ 14 ಸಾವಿರ ಲೈಸೆನ್ಸ್ ನವೀಕರಣ, ಭ್ರಷ್ಟಾಚಾರಕ್ಕೆ ಬ್ರೇಕ್!

ಬೆಂಗಳೂರು: ಕಳೆದ ವಾರ ನಡೆದ ಜಂಟಿ ಅಧಿವೇಶನದಲ್ಲಿ ವಿರೋಧ ಪಕ್ಷಗಳಿಂದ ತೀವ್ರ ವಾಗ್ದಾಳಿ ಎದುರಿಸಿದ್ದ ಅಬಕಾರಿ ಇಲಾಖೆ ಇದೀಗ ವ್ಯವಸ್ಥೆಯನ್ನು ಪಾರದರ್ಶಕಗೊಳಿಸುವ ದಿಟ್ಟ ಹೆಜ್ಜೆ ಇಟ್ಟಿದೆ. ಸಚಿವರ ರಾಜೀನಾಮೆ ಆಗ್ರಹ, ಭ್ರಷ್ಟಾಚಾರದ ಆರೋಪಗಳು ಮತ್ತು ಲಂಚಗುಳಿತನದ ಚರ್ಚೆಗಳ ನಡುವೆ ಇಲಾಖೆ ತನ್ನ ಕಾರ್ಯವೈಖರಿಯಲ್ಲಿ ಮಹತ್ವದ ಬದಲಾವಣೆಗಳನ್ನು ಆರಂಭಿಸಿದೆ. ವಿಶೇಷವಾಗಿ ಅಬಕಾರಿ ಪರವಾನಗಿ ಪ್ರಕ್ರಿಯೆಯಲ್ಲಿ ಕಂಡುಬರುತ್ತಿದ್ದ ವಿಳಂಬ ಹಾಗೂ ಮ ಧ್ಯವರ್ತಿಗಳ ಹಾವಳಿಯನ್ನು ಕಡಿಮೆ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಆನ್‌ಲೈನ್ ವ್ಯವಸ್ಥೆಯನ್ನು ಬಲಪಡಿಸಿದೆ.

47 ಗಂಟೆಗಳಲ್ಲಿ 14,275 ಲೈಸೆನ್ಸ್ ನವೀಕರಣ:ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಇದೇ ಮೊದಲ ಬಾರಿಗೆ ಇಷ್ಟು ವೇಗದಲ್ಲಿ ಲೈಸೆನ್ಸ್ ನವೀಕರಣ ನಡೆದಿದೆ ಎಂದು ಅಬಕಾರಿ ಸಚಿವ ಖಿ. ಓ. ಖಿಟಟಚಿ-ಠಿಣಡಿ ತಿಳಿಸಿದ್ದಾರೆ. ಕೇವಲ 47 ಗಂಟೆಗಳ ಅವಧಿಯಲ್ಲಿ ಒಟ್ಟು 14,275 ಲೈಸೆನ್ಸ್‌ಗಳನ್ನು ನವೀಕರಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಈ ಮೊದಲು ಲೈಸೆನ್ಸ್ ನವೀಕರಣಕ್ಕಾಗಿ ಅರ್ಜಿದಾರರು ತಿಂಗಳುಗಟ್ಟಲೆ ಕಚೇ-ರಿಗಳ ಸುತ್ತಾಟ ನಡೆಸಬೇಕಾಗುತ್ತಿತ್ತು. ಪ್ರತಿಯೊಂದು ಹಂತದಲ್ಲೂ ದಾಖಲೆ ಪರಿಶೀಲನೆ, ಸಹಿ, ಅನುಮೋದನೆ ಸೇ-ರಿದಂತೆ ಅನೇಕ ಹಂತಗಳು ಇದ್ದುದ-ರಿಂದ ಪ್ರಕ್ರಿಯೆ ವಿಳಂಬವಾಗುತ್ತಿತ್ತು. ಇದೀಗ ತಂತ್ರಜ್ಞಾನ ಬಳಕೆಯ ಮೂಲಕ ಈ ಪ್ರಕ್ರಿಯೆಯನ್ನು ವೇಗವಾಗಿ ಮತ್ತು ಸರಳವಾಗಿ ರೂಪಿಸಲಾಗಿದೆ.

16 ಟೇಬಲ್‌ಗಳ ಕಿರಿಕಿರಿ ಇನ್ನು ಇಲ್ಲ:ಹಿಂದಿನ ವ್ಯವಸ್ಥೆಯಲ್ಲಿ ಸಿಎಲ್-7 ಸೇರಿದಂತೆ ವಿವಿಧ ಅಬಕಾರಿ ಪರವಾ ನಗಿಗಳನ್ನು ಪಡೆಯಲು ಅರ್ಜಿದಾರರು ಬರೋಬ್ಬರಿ 16 ಟೇಬಲ್‌ಗಳ ಮೂಲಕ ಕಡತಗಳನ್ನು ಓಡಿಸಬೇಕಾಗುತ್ತಿತ್ತು. ಈ ಪ್ರಕ್ರಿಯೆ ಲಂಚ ಮತ್ತು ಅಕ್ರಮಗಳಿಗೆ ಅವಕಾಶ ನೀಡುತ್ತಿತ್ತು ಎಂಬ ಆರೋಪಗಳು ಕೇಳಿಬಂದಿದ್ದವು. ಆದರೆ ಈಗ ಆ ಹಂತಗಳನ್ನು ಕೇವಲ 7 ಟೇಬಲ್‌ಗಳಿಗೆ ಸೀಮಿತಗೊಳಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಅಗತ್ಯ ದಾಖಲೆ ಸಲ್ಲಿಕೆ, ಶುಲ್ಕ ಪಾವತಿ ಹಾಗೂ ಅನುಮೋದನೆ ಪ್ರಕ್ರಿಯೆ ಸಂಪೂರ್ಣವಾಗಿ ಆನ್‌ಲೈನ್ ಮೂಲಕ ನಡೆಯುವಂತೆ ವ್ಯವಸ್ಥೆ ಮಾಡಲಾಗಿದೆ. ಇದರಿಂದ ಮಧ್ಯವರ್ತಿಗಳ ಪಾತ್ರ ಕಡಿಮೆಯಾಗಿದ್ದು, ಅರ್ಜಿದಾರರು ನೇರವಾಗಿ ಇಲಾಖೆಯೊಂದಿಗೆ ಸಂಪರ್ಕ ಸಾಧಿಸಲು ಸಾಧ್ಯವಾಗುತ್ತದೆ.

ಪಾರದರ್ಶಕತೆ ಮತ್ತು ಕಟ್ಟುನಿಟ್ಟಿನಕ್ರಮ: ಅಧಿವೇಶನದಲ್ಲಿ ಕೇಳಿಬಂದ ಭ್ರಷ್ಟಾಚಾರದ ಆರೋಪ ಗಳಿಗೆ ತಿರುಗೇಟು ನೀಡಲು ಸರ್ಕಾರ ಆಮೂಲಾಗ್ರ ಬದಲಾ ಣೆಗಳನ್ನು ಜಾ-ರಿಗೊಳಿಸುತ್ತಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ. ಲೈಸೆನ್ಸ್ ಪ್ರಕ್ರಿಯೆಯನ್ನು ಪಾರದರ್ಶಕ ಗೊಳಿಸುವುದಷ್ಟೇ ಅಲ್ಲದೆ, ಭ್ರಷ್ಟಾಚಾ ರದಲ್ಲಿ ತೊಡಗಿರುವ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ಸಾರ್ವಜನಿಕರು ಹಾಗೂ ಉದ್ಯಮಿಗಳು ಲಂಚ ನೀಡದೆ ತಮ್ಮ ಕೆಲಸಗಳನ್ನು ಮುಗಿಸಿಕೊಳ್ಳಲು ಈ ಆನ್‌ಲೈನ್ ವೇದಿಕೆ ಸಹಕಾರಿ ಆಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ, ಅಬಕಾರಿ ಇಲಾಖೆಯ ಕಾರ್ಯಪದ್ಧ ಯಲ್ಲಿ ನಡೆದಿರುವ ಈ ಬದಲಾವಣೆಗಳು ಭ್ರಷ್ಟಾಚಾರ ನಿಯಂತ್ರಣದ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿ ಪರಿಗಣಿಸಲಾಗುತ್ತಿದೆ. ಪಾರದರ್ಶಕತೆ, ವೇಗ ಮತ್ತು ಸರಳತೆ ಎಂಬ ಮೂರು ಅಂಶಗಳನ್ನು ಆಧಾರವಾಗಿಸಿಕೊಂಡು ಇಲಾಖೆ ಹೊಸ ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಮುಂದಿನ ದಿನಗಳಲ್ಲಿ ಇದರ ಪರಿಣಾಮ ಎಷ್ಟರ ಮಟ್ಟಿಗೆ ಕಂಡುಬರುತ್ತದೆ ಎಂಬುದು ಕಾದುನೋಡಬೇಕಾಗಿದೆ.

ನೇಣುಬಿಗಿದು ಎಸ್ ಎಸ್ ಎಲ್ ಸಿ ವಿದ್ಯಾರ್ಥಿ ಸೂಸೈಡ್

ಪರೀಕ್ಷೆಗೆ ಹೆದರಿ ಆತ್ಮಹತ್ಯೆ ಶಂಕೆ

ಬೀದರ್:ಜಿಲ್ಲೆಯ ಬಸವ ಕಲ್ಯಾಣ ತಾಲೂಕಿನ ನಾರಾಯಣ ಪುರ ಗ್ರಾಮದ ನವೋದಯ ವಸತಿ ಶಾಲೆಯಲ್ಲಿ ಹೃದಯವಿದ್ರಾವಕ ಘಟನೆ ನಡೆದಿದೆ. ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಯೊಬ್ಬ ಹಾಸ್ಟೆಲ್‌ನಲ್ಲೇ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದ್ದು, ಕುಟುಂಬಸ್ಥರು ಮತ್ತು ಗ್ರಾಮಸ್ಥರಲ್ಲಿ ದುಃಖದ ವಾತಾವರಣ ನಿರ್ಮಾಣ ವಾಗಿದೆ.

ಮೃತ ವಿದ್ಯಾರ್ಥಿಯನ್ನು ಮಂಠಾಳ ಗ್ರಾಮದ ಶರತ್ (16) ಎಂದು ಗುರುತಿಸಲಾಗಿದೆ. ಆತ ನವೋದಯ ವಸತಿ ಶಾಲೆಯಲ್ಲಿ 10ನೇ ತರಗತಿ ಓದುತ್ತಿದ್ದನು ಎಂದು ತಿಳಿದುಬಂದಿದೆ. ಓದಿನಲ್ಲಿ ಸಾಮಾನ್ಯವಾಗಿದ್ದ ವಿದ್ಯಾರ್ಥಿ ಅಚಾನಕ್ ಇಂತಹ ಕೃತ್ಯಕ್ಕೆ ಮುಂದಾಗಿರುವುದು ಶಾಲಾ ವಲಯದಲ್ಲಿ ಆತಂಕ ಹುಟ್ಟಿಸಿದೆ.

ಮಾಹಿತಿ ಪ್ರಕಾರ, ಶರತ್ ಹಾಸ್ಟೆಲ್ ಕೊಠಡಿಯಲ್ಲಿ ಡೆತ್‌ನೋಟ್ ಬರೆದು ಇಟ್ಟು ನೇಣು ಬಿಗಿದುಕೊಂಡಿದ್ದಾನೆ. ಪತ್ತೆಯಾದ ಡೆತ್‌ನೋಟ್‌ನಲ್ಲಿ "ಮಮ್ಮಿ ಸಾರಿ ಅಪ್ಪ ಐ ಲವ್ ಯು ಯಾವಾಗಲೂ ನಗ್ತಾ ಇರಿ" ಎಂದು ಬರೆದಿರುವುದು ಕಂಡುಬಂದಿದೆ. ಈ ಪದಗಳು ಕುಟುಂಬಸ್ಥರ ಹೃದಯವನ್ನು ಭೇದಿಸಿವೆ. ತನ್ನ ತಾಯಿಗೆ ಕ್ಷಮೆಯಾಚಿಸಿ, ತಂದೆಗೆ ಪ್ರೀತಿ ವ್ಯಕ್ತಪಡಿಸಿರುವುದು ಘಟನೆಯ ಗಂಭೀರತೆಯನ್ನು ಹೆಚ್ಚಿಸಿದೆ.

ಘಟನೆ ತಿಳಿದ ತಕ್ಷಣ ಬಸವಕಲ್ಯಾಣ ನಗರ ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಶೇಖರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿದ್ಯಾರ್ಥಿ ಮುಂಬರುವ ಪರೀಕ್ಷೆಗಳ ಒತ್ತಡದಿಂದ ಹೆದರಿದ್ದಾನೆ ಎಂಬ ಶಂಕೆ ವ್ಯಕ್ತವಾಗುತ್ತಿದೆ. ಆದರೆ ಆತ್ಮಹತ್ಯೆಗೆ ನಿಖರ ಕಾರಣ ಏನು ಎಂಬುದು ಇನ್ನೂ ಸ್ಪಷ್ಟವಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮೃತದೇಹವನ್ನು ಮರಣೋತ್